ಪ್ರದರ್ಶಿನ ಮಾಡಿ ನಾನು ಧರಣಿ ಕುಳಿತುಕೊಳ್ಳಬೇಕೆಂದು ಮಾಡಿದ್ದೇನೆ. ಇದು ಸರಿಯಾದ ನೀತಿಯಲ್ಲ.

ಅಧ್ಯಕ್ಷರು : ಮಾನ್ಯ ವಾಟಾಳ್ ನಾಗರಾಜ್‌ರವರೆ, ನನ್ನ ಮಾತನ್ನು ಕೇಳಿ. ನಿಮಗೆ ನೋವಾದಾಗಲೆಲ್ಲ ದಯವಿಟ್ಟು ಧರಣಿ ಮಾಡಬೀಡಿ. ನಿಮಗೆ ನೋವು ಆಗಿಂದಾಗ್ಗೆ ಆಗುತ್ತಿರುತ್ತದೆ. ತಾವು ಧರಣಿ ಮಾಡುವುದು ಬೇಡ. ಏತಕ್ಕೆ ಧರಣಿ ಸುಮ್ಮನೆ? ನಿಮ್ಮ ಮಾತಿನ ಬಗ್ಗೆ ಕಳಕಳಿಯಿದೆ.

(ಮಾನ್ಯ ಸದಸ್ಯರಾದ ವಾಟಾಳ್ ನಾಗರಾಜ್‌ರವರು ಮಾತನಾಡುತ್ತಾ ತಮ್ಮ ಪೀಠದಿಂದ ಎದ್ದು ಅಧ್ಯಕ್ಷರ ಪೀಠದ ಮುಂದೆ ಬಂದು ಕುಳಿತುಕೊಂಡರು)

(ಗೊಂದಲ)

ಅಧ್ಯಕ್ಷರು : ಆಲ್ ರೈಟ್ ಮಾನ್ಯ ಕಂದಾಯಮಂತ್ರಿಗಳು.

1990ನೇ ಇಸವಿಯ ಭೂ ಕಂದಾಯ (ತಿದ್ದುಪಡಿ) ವಿಧೇಯಕ ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು): ಮಾನ್ಯ ಅಧ್ಯಕ್ಷರೇ, 1990ನೇ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚನೆಗೆ ತೆಗೆದುಕೊಳ್ಳಬೇಕೆಂದು ವಿನಂತಿಕೊಳ್ಳುತ್ತೇನೆ.

ಪ್ರಸ್ತಾಪವನ್ನು ಮಂಡಿಸಲಾಯಿತು

ಶ್ರೀ ಪಿ.ಜಿ.ಆರ್. ಸಿಂಧ್ಯಾ : ಮಾನ್ಯ ಅಧ್ಯಕ್ಷರೆ, ಒಂದು ವಿಷಯವನ್ನು ಪ್ರಸ್ತಾಪ ಮಾಡುವುದಕ್ಕೆ ದಯವಿಟ್ಟು ಅವಕಾಶ ಕೊಡಿ.

ಅಧ್ಯಕ್ಷರು : ಸಾಧ್ಯವಿಲ್ಲ, ಇಲ್ಲ, ಇಲ್ಲ ಸಾಧ್ಯವಿಲ್ಲ. ಮಾನ್ಯ ವಿರೋಧಪಕ್ಷದ ಉಪನಾಯಕರೇ ಅವಕಾಶ ಕೊಡುವುದಕ್ಕೆ ಸಾಧ್ಯವಾಗುವುದಿಲ್ಲ.

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ : ಒಂದು ಬಿಲ್ ಇದೆ, ಅದು ಮುಗಿಯಲಿ.

ಶ್ರೀ ಪಿ.ಜಿ.ಆರ್. ಸಿಂಧ್ಯಾ : ಒಂದು ನಿಮಿಷದಲ್ಲಿ ಮುಗಿಸುತ್ತೇನೆ.

ಅಧ್ಯಕ್ಷರು : ಸ್ವಲ್ಪ ಕೇಳಿ, ನಾಳೆ ಕನ್ನಡ ಸಾಹಿತ್ಯ ಸಮ್ಮೇಳನವಿದೆ, ಸಂತೋಷದಿಂದ ಈ ಸಭೆಯಿಂದ ವಿರಮಿಸೋಣವೆಂದರೆ.....

ಶ್ರೀ ಪಿ.ಜಿ.ಆರ್. ಸಿಂಧ್ಯ : ಮಾನ್ಯ ಅಧ್ಯಕ್ಷರೆ ತಾವು ಸರ್ಕಾರಕ್ಕೆ ಒಂದು ಸೂಚನೆಯನ್ನು ಕೊಟ್ಟಿದ್ದೀರಿ. ಮುಂದಿನ ಅಧಿವೇಶನ ಸೇರುವುದರೊಳಗೆ ಬೆಳಗಾವಿ ಮಹಾನಗರ ಪಾಲಿಕೆಯವರು ಹಾಕಿಕೊಂಡಿರತಕ್ಕ ಬಾವುಟದ ಬ್ಯಾಕ್‌ಗ್ರೌಂಡ್‌ನಲ್ಲಿ ಏನು ಮಾಡಬೇಕು ಎನ್ನುವುದರ ಬಗ್ಗೆ ತಾವು ಸೂಚನೆಯನ್ನು ಸರ್ಕಾರಕ್ಕೆ ಕೊಟ್ಟಿದ್ದೀರಿ, ಅದಕ್ಕೆ ನಾವು ನಿಮ್ಮನ್ನು ಅಭಿನಂದಿಸುತ್ತೇವೆ. ತಾವು ಸರ್ಕಾರಕ್ಕೆ ಸೂಚನೆಯನ್ನು ಕೊಟ್ಟು ಬಹಳ ಒಳ್ಳೆಯ ಕೆಲಸವನ್ನು ಮಾಡಿದ್ದೀರಿ, ಅದಕ್ಕೆ ನಾವು ಅಭಿನಂದಿಸುತ್ತೇವೆ. ಮಾನ್ಯ ವಾಟಾಳ್ ನಾಗರಾಜ್‌ರವರು ಏನು ಪ್ರಸ್ತಾಪ ಮಾಡಿದ್ದಾರೆ. ಅಂದರೆ ಸೊಲ್ಲಾಪುರದಿಂದ 800 ಕಿಲೋಮೀಟರ್ ದೂರದಿಂದ ಏನು ಜನರು ಬಂದಿದ್ದಾರೆ ಅವರಿಗೆ ಒಂದು ಭರವಸೆ ಬೇಕು. ಮಾನ್ಯ ಮಂತ್ರಿಗಳು